**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) ಇವರು ನಿಯಮ 330ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರ ಹೇಳಿಕೆ.**

**ವಿಷಯ:**

ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರಿಗೆ ಗೌರವ ಧನ ಹೆಚ್ಚಳ ಹಾಗೂ ಸೇವಾ ಭದ್ರತೆಯನ್ನು ಒದಗಿಸುವ ಬಗ್ಗೆ.

**ಉತ್ತರ**

ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್ ಹಾಗೂ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಮಾಸಿಕ ಸಂಭಾವನೆಯನ್ನು ಕಾಲ ಕಾಲಕ್ಕೆ ಪರಿಷ್ಕರಿಸಿರುವ ಮಾಹಿತಿ ಈ ಕೆಳಕಂಡಂತಿದೆ.

- ಸರ್ಕಾರಿ ಆದೇಶ ಸಂಖ್ಯೆ:ಇಡಿ 14 ಟಿಪಿಇ 95, ದಿನಾಂಕ:17-06-1997ರಂತೆ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದಲ್ಲಿ ಬರುವ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು ಮತ್ತು ಅನುದಾನಿತ/ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳ ಮಾಸಿಕ ಸಂಭಾವನೆಯನ್ನು ರೂ.1,200/-ಕ್ಕೆ ನಿಗದಿಗೊಳಿಸಿ ಮಂಜೂರಾತಿ ನೀಡಲಾಗಿರುತ್ತದೆ.

- ಸರ್ಕಾರಿ ಆದೇಶ ಸಂಖ್ಯೆ:ಇಡಿ 118 ಟಿಪಿಇ 2008, ದಿನಾಂಕ:13-07-2006ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದಲ್ಲಿ ಬರುವ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು ಮತ್ತು ಅನುದಾನಿತ/ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳ ಮಾಸಿಕ ಸಂಭಾವನೆಯನ್ನು ರೂ.1,800/-ಕ್ಕೆ ನಿಗದಿಗೊಳಿಸಿ ಮಂಜೂರಾತಿ ನೀಡಲಾಗಿರುತ್ತದೆ.

- ಸರ್ಕಾರಿ ಆದೇಶ ಸಂಖ್ಯೆ:ಇಡಿ 236 ಟಿಪಿಇ 2007, ದಿನಾಂಕ:01-12-2008ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದಲ್ಲಿ ಬರುವ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳ ಮಾಸಿಕ ಸಂಭಾವನೆಯನ್ನು ಪಾಠ ಪ್ರವಚನ/ಪ್ರಯೋಗಾಲಯದ ತರಗತಿಯ ಪ್ರತಿ ಗಂಟೆಗೆ ರೂ.350/- (ಮಾಸಿಕ ಗರಿಷ್ಠ ರೂ.7,500/- ಮೀರದಂತೆ) ನಿಗದಿಗೊಳಿಸಿ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳ ಮಾಸಿಕ ಸಂಭಾವನೆಯನ್ನು ಪಾಠ ಪ್ರವಚನ/ಪ್ರಯೋಗಾಲಯದ ತರಗತಿಯ ಪ್ರತಿ ಗಂಟೆಗೆ ರೂ.500/-(ಮಾಸಿಕ ಗರಿಷ್ಠ ರೂ.10,000/- ಮೀರದಂತೆ) ನಿಗದಿಗೊಳಿಸಿ ಮಂಜೂರಾತಿ ನೀಡಲಾಗಿರುತ್ತದೆ.

- ಸರ್ಕಾರದ ಆದೇಶ ಸಂಖ್ಯೆ:ಇಡಿ 16 ಟಿಪಿಇ 2017, ದಿನಾಂಕ:11.12.2019ರಲ್ಲಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಮಾಸಿಕ ಗೌರವ ಧನವನ್ನು ರೂ.7,500/- ರಿಂದ 12,500/- ಕ್ಕೆ ಹೆಚ್ಚಿಸಲಾಗಿದ್ದು ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಮಾಸಿಕ ಗೌರವ ಧನವನ್ನು ರೂ.10,000/- ರಿಂದ 15,000/-ಕ್ಕೆ ಹೆಚ್ಚಿಸಲಾಗಿದ್ದು , ಪ್ರಸ್ತುತ ಜಾರಿಯಲ್ಲಿರುತ್ತದೆ.

- ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳು ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕೋರಿ ಸಲ್ಲಿಸಿರುವ ಬೇಡಿಕೆ ಹಾಗೂ ಮನವಿಗಳನ್ನು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರ ಪತ್ರ ಸಂಖ್ಯೆ:ಸಿಟಿಇ 42 ಡಿವಿಪಿ(1)2021, ದಿನಾಂಕ:08.02.2023ರಲ್ಲಿ ಸರ್ಕಾರಕ್ಕೆ ಸಲ್ಲಿಸಿದ್ದು, ಪರಿಶೀಲನೆಯಲ್ಲಿರುತ್ತದೆ.

ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಪಾಲಿಟೆಕ್ನಿಕ್‌ಗಳಲ್ಲಿ ಖಾಯಂ ಉಪನ್ಯಾಸಕರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು, ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅವಶ್ಯವಿರುವ ಅರೆಕಾಲಿಕ ಉಪನ್ಯಾಸಕರ ಹುದ್ದೆಗೆ ಈ ಹಿಂದೆ ಸೇವೆ ಸಲ್ಲಿಸಿದ/ಆಸಕ್ತರಿಂದ ಸಂಸ್ಥೆಯ ಹಂತದಲ್ಲಿ ಅರ್ಜಿ ಪಡೆದು, ಪ್ರಾಂಶುಪಾಲರ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ವಿಷಯಗಳ ವಿಭಾಗದ ಮುಖ್ಯಸ್ಥರು/ಹಿರಿಯ ಉಪನ್ಯಾಸಕರು ಮತ್ತು ಆಡಳಿತ ವಿಭಾಗದ ಅಧಿಕಾರಿ/ಸಿಬ್ಬಂದಿ ವರ್ಗದವರನ್ನೊಳಗೊಂಡ ಆಯ್ಕೆ ಸಮಿತಿ ರಚಿಸಿ, ಅರ್ಜಿಗಳನ್ನು ಪರಿಶೀಲಿಸಿ, ಎಐಸಿಟಿಇ ನಿಯಮಾನುಸಾರ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳನ್ನು ಅರೆಕಾಲಿಕ ಉಪನ್ಯಾಸಕರನ್ನಾಗಿ ನೇಮಿಸಿಕೊಳ್ಳಲು ಪ್ರಾಂಶುಪಾಲರಿಗೆ ಅನುಮತಿ ನೀಡಲಾಗಿರುತ್ತದೆ. ಪ್ರಸ್ತುತ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ 1301 ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 339 ಅಭ್ಯರ್ಥಿಗಳು ಅರೆಕಾಲಿಕ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಈ ಸಂಬಂಧಪಟ್ಟಂತೆ ಪ್ರಸ್ತುತ ಮನವಿಯನ್ನು ಸ್ವೀಕೃತಗೊಂಡಿರುವ ಹಿನ್ನೆಲೆಯಲ್ಲಿ ವೇತನ ಪರಿಷ್ಕರಣೆ ಬಗ್ಗೆ ಅಗತ್ಯ ಪ್ರಸ್ತಾವನೆ ಸಲ್ಲಿಸಲು ಈಗಾಗಲೇ ಸೂಚಿಸಿರುತ್ತೇನೆ.

**ಇಡಿ 22 ಟಿಪಿಇ 2023**

**(ಡಾ|| ಅಶ್ವತ್ಥನಾರಾಯಣ್.ಸಿ.ಎನ್)**
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಹಾಗೂ ಜೀವನೋಪಾಯ ಇಲಾಖೆ ಸಚಿವರು